**ಕೆ.ವಿ.ಜಿ. ಇಂಜಿನಿಯರಿಂಗ್ ಕಾಲೇಜಿನ ವಿದ್ಯಾರ್ಥಿನಿ ಚರಿಷ್ಮಾ ಕಡಪಳಿಗೆ ಅರಳು ಮಲ್ಲಿಗೆ ಪ್ರಶಸ್ತಿ**



ಬೆಂಗಳೂರಿನ ಜ್ಞಾನಮಂದಾರ ಅಕಾಡೆಮಿ ಕೊಡಮಾಡುವ ಅರಳು ಮಲ್ಲಿಗೆ ಕರ್ನಾಟಕ ಚೇತನ ರಾಜ್ಯ ಪ್ರಶಸ್ತಿಗೆ ಸುಳ್ಯದ ಚರಿಷ್ಮಾ ಕಡಪಳ ಆಯ್ಕೆಯಾಗಿದ್ದಾಳೆ.

ಸಾಹಿತ್ಯ ಕ್ಷೇತ್ರದ ಸಾಧನೆಗಾಗಿ ಈ ಪ್ರಶಸ್ತಿ ನೀಡಲಾಗಿದೆ. ಭಾಷಣ ಕಲೆಯಲ್ಲಿ ವಿಶೇಷ ಪ್ರತಿಭೆ ಹೊಂದಿರುವ ಈಕೆ ರಾಜ್ಯ ಮಟ್ಟದ ಹಲವು ಭಾಷಣ ಸ್ಪರ್ಧೆಗಳಲ್ಲಿ ಹಲವು ಪ್ರಥಮ ಸ್ಥಾನಗಳಿಸಿದ್ದಳು. ಯಕ್ಷಗಾನ, ನಾಟಕ, ನೃತ್ಯ, ಪ್ರಬಂಧ ಹಾಗೂ ಕ್ರೀಡಾ ಕ್ಷೇತ್ರದಲ್ಲಿಯೂ ಆಸಕ್ತಿ ಹೊಂದಿರುವ ಚರಿಷ್ಮಾ ೨೦೧೮-೧೯ನೇ ಸಾಲಿನ ತಾಲೂಕು ಮಕ್ಕಳ ಸಾಹಿತ್ಯ ಸಮ್ಮೇಳನದ ಅಧ್ಯಕ್ಷತೆ ವಹಿಸಿದ್ದಳು. ಇತ್ತೀಚೆಗೆ ಝೀ ಕನ್ನಡ ವಾಹಿನಿಯಲ್ಲಿ ಪ್ರಸಾರವಾದ ಹೆಮ್ಮೆಯ ಕನ್ನಡಿಗ ಕಾರ್ಯಕ್ರಮದಲ್ಲಿ ನೃತ್ಯ ಪ್ರದರ್ಶನ ನೀಡಿದ್ದಳು.

ಅಮರಮುಡ್ನೂರು ಗ್ರಾಮದ ಪೈಲಾರಿನ ಕಡಪಳ ಯಾದವೇಂದ್ರ ಮತ್ತು ಮನೋರಮ ದಂಪತಿಯ ಪುತ್ರಿಯಾಗಿರುವ ಚರಿಷ್ಮಾ ಪೈಲಾರು ಸ.ಹಿ.ಪ್ರಾ.ಶಾಲೆ, ಚೊಕ್ಕಾಡಿ ಪ್ರೌಢಶಾಲೆ ಕುಕ್ಕುಜಡ್ಕ, ಸ.ಪ.ಪೂ. ಕಾಲೇಜು, ಸುಳ್ಯ ಇಲ್ಲಿನ ಹಳೆ ವಿದ್ಯಾರ್ಥಿನಿಯಾಗಿದ್ದು ಪ್ರಸ್ತುತ ಕೆ.ವಿ.ಜಿ. ಇಂಜಿನಿಯರಿಂಗ್ ಕಾಲೇಜಿನ ಪ್ರಥಮ ಬಿ.ಇ. ವಿದ್ಯಾರ್ಥಿನಿ.